# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 95 (905)**
**ಸದಸ್ಯರ ಹೆಸರು : ಶ್ರೀಮತಿ ಭಾರತಿ ಶೆಟ್ಟಿ (ನಾಮ ನಿರ್ದೇಶನ ಹೊಂದಿದವರು)**
**ಉತ್ತರಿಸುವ ದಿನಾಂಕ : 17.12.2024**
**ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಐ.ಎ.ಡಿ.ಬಿ ಗೆ ರೈತರಿಂದ ಜಮೀನು ಭೂಸ್ವಾಧೀನ ಪಡಿಸಿಕೊಳ್ಳುವಾಗ ಪ್ರಸ್ತುತ ಯಾವ ಕ್ರಮಗಳನ್ನು ಅನುಸರಿಸಲಾಗುತ್ತಿದೆ; | ಕೆ.ಐ.ಎ.ಡಿ.ಬಿ. ವತಿಯಿಂದ ಸ್ವಾಧೀನಪಡಿಸಿಕೊಳ್ಳುವ ಕೈಗಾರಿಕಾ ಜಮೀನುಗಳಿಗೆ ಇರುವ ಬೇಡಿಕೆಗಳಿಗೆ ಅನುಗುಣವಾಗಿ ಮಂಡಳಿಯ ವಿಶೇಷ ಭೂಸ್ವಾಧೀನಾಧಿಕಾರಿ, ಕಾರ್ಯಪಾಲಕ ಅಭಿಯಂತರರು ಮತ್ತು ಸಂಬಂಧಪಟ್ಟ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಸಹಯೋಗದೊಂದಿಗೆ ನಿರ್ದಿಷ್ಟ ಸ್ಥಳಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಜಮೀನುಗಳನ್ನು ಗುರುತಿಸಿದ ನಂತರ ಮಂಡಳಿ ಸಭೆಯ ಅನುಮೋದನೆ ಪಡೆದು ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸರ್ಕಾರವು ದಿನಾಂಕ:18-03-2013 ರಂದು ಹೊರಡಿಸಿರುವ ಸುತ್ತೋಲೆಯಲ್ಲಿನ ನಿರ್ದೇಶನ ಅನುಸಾರ ಜಮೀನನ್ನು ಸ್ವಾಧೀನಪಡಿಸಲು ಕ್ರಮ ವಹಿಸಲಾಗುತ್ತಿದೆ.<br><br>**ಅನುಬಂಧ-1 ರಲ್ಲಿ** ಸುತ್ತೋಲೆಯ ಪ್ರತಿ ಲಗತ್ತಿಸಿದೆ. |
| ಆ) | ಈ ಕ್ರಮದಿಂದ ರೈತರಿಗಿಂತ ಮಧ್ಯವರ್ತಿಗಳೇ ಲಾಭ ಮಾಡಿಕೊಳ್ಳುತ್ತಿರುವುದನ್ನು ಸರ್ಕಾರ ಯಾವ ರೀತಿಯಲ್ಲಿ ಗಮನಿಸುತ್ತಿದೆ; | ಕೆ.ಐ.ಎ.ಡಿ.ಬಿ. ವತಿಯಿಂದ ಸ್ವಾಧೀನಪಡಿಸಿಕೊಳ್ಳುವ ಜಮೀನಿನ ಪರಿಹಾರವನ್ನು ಸಂಬಂಧಪಟ್ಟ ಖಾತೆದಾರರಿಗೆ RTGS ಮುಖಾಂತರ ನೇರವಾಗಿ ಭೂಪರಿಹಾರವನ್ನು ಜಮೆ ಮಾಡಲಾಗುತ್ತಿದೆ. |
| ಇ) | ಕೈಗಾರಿಕೆಗಳ ಉದ್ದೇಶಕ್ಕೆ ರೈತರ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳುವಾಗ ಸದರಿ ರೈತರನ್ನು ಜಮೀನಿನಲ್ಲಿ ಸ್ಥಾಪಿತವಾಗುವ ಕೈಗಾರಿಕೆಗಳಲ್ಲಿ ಸಹಭಾಗಿತ್ವವನ್ನು ಹೊಂದುವಂತೆ ಸರ್ಕಾರ ಯಾವ ರೀತಿಯಲ್ಲಿ ಚಿಂತನೆ ನಡೆಸುತ್ತಿದೆ; (ವಿವರ ಒದಗಿಸುವುದು) | ರಾಜ್ಯ ಸರ್ಕಾರವು ಕೈಗಾರಿಕಾ ಪ್ರದೇಶಗಳ ಸ್ಥಾಪನೆಗೆ ಕೆಐಎಡಿ ಕಾಯ್ದೆ, 1996ರನ್ವಯ ಭೂಸ್ವಾಧೀನ ಪಡಿಸಿಕೊಳ್ಳುತ್ತಿದ್ದು, ಈ ಕಾಯ್ದೆಯನ್ವಯ ರೈತರನ್ನು ಅವರ ಜಮೀನಿನಲ್ಲಿ ಸ್ಥಾಪಿತವಾಗುವ ಕೈಗಾರಿಕೆಗಳಲ್ಲಿ ಸಹಭಾಗಿತ್ವ ನೀಡಲು ಅವಕಾಶವಿರುವುದಿಲ್ಲ. |
| ಈ) | ರಾಜ್ಯದಲ್ಲಿ ವಿವಿಧ ನಗರಾಭಿವೃದ್ಧಿ ಪ್ರಾಧಿಕಾರಗಳು ರೈತರಿಂದ ಭೂಸ್ವಾಧೀನ ಪಡಿಸಿಕೊಳ್ಳುವಾಗ ಅಭಿವೃದ್ಧಿ ಪಡಿಸಲಾದ ನಿವೇಶನಗಳನ್ನು ಹಂಚಿಕೆ ಮಾಡುವ ರೀತಿಯಲ್ಲಿ ರೈತರು ಹಾಗೂ ಕೈಗಾರಿಕೋಧ್ಯಮಿಗಳ ಪಾಲುಗಾರಿಕೆ ಹೊಂದುವಂತಾಗಿ ರೈತರು ಹಾಗೂ ಕೈಗಾರಿಕೋಧ್ಯಮಿಗಳ | ರಾಜ್ಯದಲ್ಲಿ ವಿವಿಧ ನಗರಾಭಿವೃದ್ಧಿ ಪ್ರಾಧಿಕಾರಗಳು ರೈತರಿಂದ ಭೂಸ್ವಾಧೀನ ಪಡಿಸಿಕೊಳ್ಳುವಾಗ ಅಭಿವೃದ್ಧಿ ಪಡಿಸಲಾದ ನಿವೇಶನಗಳನ್ನು ಹಂಚಿಕೆ ಮಾಡುವ ರೀತಿಯಲ್ಲೇ, ಸರ್ಕಾರಿ ಆದೇಶ ಸಂಖ್ಯೆ ಸಿಐ 103 ಎಸ್‌ಪಿಕ್ಯೂ 2019, ದಿನಾಂಕ 23.02.2021 ರನ್ವಯ ಕೆಐಎಡಿಬಿ ಯಿಂದ ಭೂಸ್ವಾಧೀನ ಪಡಿಸಿಕೊಳ್ಳುತ್ತಿರುವ ಕೈಗಾರಿಕಾ ಪ್ರದೇಶದ ಜಮೀನುಗಳಿಗೆ ಭೂಪರಿಹಾರದ ಬದಲಾಗಿ ಪ್ರತಿ ಎಕರೆ ಜಮೀನಿಗೆ 10,781 |

| | | |
|---|---|---|
| | ಸಮಿತಿಯನ್ನು ರಚಿಸಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುತ್ತದೆ? (ಸಂಪೂರ್ಣ ಮಾಹಿತಿ ಒದಗಿಸುವುದು) | ಚದರಡಿ ಅಭಿವೃದ್ಧಿ ಪಡಿಸಿದ ವಿಸ್ತೀರ್ಣವನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. |

**ಸಂಖ್ಯೆ: ಸಿಐ 539 ಐಎಪಿ 2024**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು**

ಅನುಬಂಧ

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಐ 590 ಎಸ್‌ಪಿಕ್ಯೂ 2012

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 18.03.2013

## ಸುತ್ತೋಲೆ

ವಿಷಯ: ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕೈಗಾರಿಕಾ ಉದ್ದೇಶಕ್ಕಾಗಿ ಜಮೀನುಗಳನ್ನು ಭೂಸ್ವಾಧೀನಪಡಿಸಲು ಅನುಸರಿಸಬೇಕಾದ ವಿಧಾನಗಳ ಬಗ್ಗೆ

* * * *

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕೈಗಾರಿಕಾ ಉದ್ದೇಶಕ್ಕಾಗಿ / ಏಕ ಘಟಕ ಸಂಕೀರ್ಣ ಯೋಜನೆಗಳಿಗಾಗಿ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಈ ಕೆಳಕಂಡ ಪ್ರಕರಣಗಳಲ್ಲಿ ಸರಿಯಾಗಿ ಪರಿಶೀಲಿಸದೆಯೇ ಕೆ.ಐ.ಎ.ಡಿ.ಬಿ.ಯು ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

1. ಕೆ.ಐ.ಎ.ಡಿ. ಕಾಯ್ದೆ ಕಲಂ 28(1)ರ ಪ್ರಾಥಮಿಕ ಅಧಿಸೂಚನೆಯಲ್ಲಿ ದೇವಸ್ಥಾನ, ಶಾಲೆಗಳು, ಸ್ಮಶಾನಗಳು ಮತ್ತು ವಾಸದ ಮನೆಗಳು ಸೇರಿರುತ್ತವೆ.
2. ಹಾಲಿ ನಡೆಯುತ್ತಿರುವ ವಿವಿಧ ಕೈಗಾರಿಕೆಗಳು / ರೋಗಗ್ರಸ್ಥ ಕೈಗಾರಿಕಾ ಘಟಕಗಳು ಹೊಂದಿರುವ ಜಮೀನುಗಳು ಸೇರಿರುತ್ತವೆ.
3. ಸ್ಥಳೀಯ ಯೋಜನಾ ಪ್ರಾಧಿಕಾರಗಳು ವಸತಿ ಉದ್ದೇಶಕ್ಕೆ ಅನುಮೋದಿಸಲ್ಪಟ್ಟಿರುವ ಜಮೀನುಗಳು / ಸರ್ಕಾರದ ಭೂ ಬದಲಾವಣೆಗೊಂಡಿರುವ ಜಮೀನುಗಳು / ಜಿಲ್ಲಾಧಿಕಾರಿಗಳು ಭೂ ಪರಿವರ್ತನೆ ನೀಡಿರುವ ಪ್ರಕರಣಗಳಿಗೆ ಸಂಬಂಧಿಸಿದ ಜಮೀನುಗಳು ಸೇರಿರುತ್ತವೆ.
4. ತೋಟಗಳು, ಫಲವತ್ತಾದ ಜಮೀನು ಹಾಗೂ ವರ್ಷಕ್ಕೆ 2 ಬೆಳೆ ಬೆಳೆಯುವ ಜಮೀನುಗಳು, ತರಿ ಜಮೀನುಗಳು ಸೇರಿರುತ್ತವೆ.

ಕೆ.ಐ.ಎ.ಡಿ. ಕಾಯ್ದೆ ಕಲಂ 28(4)ರಡಿ ಅಂತಿಮ ಅಧಿಸೂಚನೆಯನ್ನು ತಯಾರಿಸುವಾಗ ಮೇಲೆ ಹೇಳಿದ ಜಮೀನುಗಳನ್ನು ಹೊರತುಪಡಿಸಿ, ಕೆ.ಐ.ಎ.ಡಿ. ಕಾಯ್ದೆ ಕಲಂ 4ರಡಿ ಅಧಿಸೂಚನೆಯನ್ನು ಹೊರಡಿಸಲಾಗುತ್ತಿದೆ. ಇದರಿಂದಾಗಿ ಪ್ರಾಥಮಿಕ ಅಧಿಸೂಚನೆ ವಿಸ್ತೀರ್ಣಕ್ಕೂ, ಅಂತಿಮ ಅಧಿಸೂಚನೆಯಲ್ಲಿನ ವಿಸ್ತೀರ್ಣಕ್ಕೂ ವ್ಯತ್ಯಾಸ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

. . . . 2

ಈ ನ್ಯೂನತೆಗಳನ್ನು ಸರಿಪಡಿಸಲು ಈ ಹಿಂದೆ ದಿನಾಂಕ: 03.03.2007ರಂದು ಹೊರಡಿಸಲಾದ ಸುತ್ತೋಲೆ ಸಂಖ್ಯೆ: ಸಿಐ 151 ಎಸ್‌ಪಿಕ್ಯೂ 2007ನ್ನು ಈ ಕೆಳಕಂಡ ಅಂಶಗಳಿಗೆ ಸಂಬಂಧಿಸಿದಂತೆ ಭಾಗಶಃ ಮಾರ್ಪಡಿಸಲಾಗಿದೆ.

ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ಉದ್ದೇಶಕ್ಕೆ / ಏಕ ಘಟಕ ಸಂಕೀರ್ಣ ಯೋಜನೆಗಳಿಗೆ ಜಮೀನುಗಳನ್ನು ಭೂಸ್ವಾಧೀನಪಡಿಸಲು ಪ್ರಾಥಮಿಕ ಅಧಿಸೂಚನೆಯನ್ನು ತಯಾರಿಸುವ ಸಂದರ್ಭದಲ್ಲಿ ಇನ್ನು ಮುಂದೆ ಈ ಕೆಳಕಂಡ ವಿಧಾನವನ್ನು ಪಾಲಿಸಲು ಈ ಮೂಲಕ ಸೂಚಿಸಲಾಗಿದೆ.:

1. ಪ್ರಾಥಮಿಕ ಅಧಿಸೂಚನೆ ಪ್ರಸ್ತಾವನೆಯನ್ನು ಸಿದ್ಧಪಡಿಸುವ ಮೊದಲು ವಿಶೇಷ ಭೂಸ್ವಾಧೀನಾಧಿಕಾರಿಯವರು ಪ್ರಸ್ತಾಪಿತ ಜಮೀನಿನ ಮೇಲ್ಮೈಲಕ್ಷಣಗಳ ಬಗ್ಗೆ ಸ್ಥಳ ಪರಿಶೀಲನೆ ನಡೆಸಿದ ನಂತರ ಸ್ಥಳ ತನಿಖಾ ಟಿಪ್ಪಣಿ ಸಹಿತ ಪ್ರಾಥಮಿಕ ಅಧಿಸೂಚನೆ ಪ್ರಸ್ತಾವನೆಯನ್ನು ಸಲ್ಲಿಸುವುದು ಹಾಗೂ ಅಂತಿಮ ಅಧಿಸೂಚನೆ ಹೊರಡಿಸುವ ಮೊದಲು ಜಂಟಿ ಅಳತೆ ಕಾರ್ಯವನ್ನು ಪೂರೈಸಿ, ನಂತರ ಅಂತಿಮ ಅಧಿಸೂಚನೆ ಪ್ರಸ್ತಾವನೆ ಸಿದ್ಧಪಡಿಸುವುದು.
2. ದೇವಸ್ಥಾನ, ಸ್ಮಶಾನ, ಶಾಲೆ ಮತ್ತು ಆಟದ ಮೈದಾನ, ವಾಸದ ಮನೆಗಳು / ವಸತಿ ಪ್ರದೇಶಗಳನ್ನು ಆಯಕಟ್ಟಿಗೆ ಧಕ್ಕೆ ಉಂಟಾಗದಂತೆ ಸಾಧ್ಯವಾದಷ್ಟು ಭೂಸ್ವಾಧೀನ ಪ್ರಕ್ರಿಯೆಯಿಂದ ಹೊರತುಪಡಿಸುವುದು.
3. ಹಾಲಿ ನಡೆಯುತ್ತಿರುವ ವಿವಿಧ ಕೈಗಾರಿಕೆಗಳು, ರೋಗಗ್ರಸ್ಥ ಕೈಗಾರಿಕಾ ಘಟಕಗಳ ಪ್ರದೇಶಗಳನ್ನು ಆಯಕಟ್ಟಿಗೆ ಧಕ್ಕೆ ಉಂಟಾಗದಂತೆ ಸಾಧ್ಯವಾದಷ್ಟು ಭೂಸ್ವಾಧೀನ ಪ್ರಕ್ರಿಯೆಯಿಂದ ಹೊರತುಪಡಿಸುವುದು.
4. ಆಯಕಟ್ಟಿಗೆ ಧಕ್ಕೆ ಉಂಟಾಗದಂತೆ ತೋಟಗಳು, ಫಲವತ್ತಾದ ಜಮೀನು ಹಾಗೂ ವರ್ಷಕ್ಕೆ 2 ಬೆಳೆ ಬೆಳೆಯುವ ಜಮೀನುಗಳು, ತರಿ ಜಮೀನುಗಳನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಹೊರತುಪಡಿಸುವುದು.
5. ಗ್ರಾಮಠಾಣಾದ ಸರಹದ್ದಿನಿಂದ ಗ್ರಾಮದ ಸುತ್ತಲೂ ವಿಸ್ತರಣೆಗಾಗಿ 100 ಮೀಟರ್ ವ್ಯಾಪ್ತಿಯ ಜಮೀನುಗಳನ್ನು ಹೊರತುಪಡಿಸುವುದು.

(ಎ.ವಿ. ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಕೈ.ಅ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ನೃಪತುಂಗ ರಸ್ತೆ, ಬೆಂಗಳೂರು.